ಬೆಳಗಾವಿ ಜಿಲ್ಲೆಯಲ್ಲಿ ಕೆ.ಎಸ್.ಆರ್.ಟಿ.ಸಿ ಯಿಂದ ಹೊಸ ಮಾರ್ಗಗಳನ್ನು ಪ್ರಾರಂಭಿಸುವುದು.

26(3) -ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಹಾಗೂ ಪ್ರಸ್ತುತ ವರ್ಷದಲ್ಲಿ ಎಷ್ಟು ಹೊಸ ಮಾರ್ಗಗಳನ್ನು ಪ್ರಾರಂಭಿಸಲಾಗಿದೆ; ಅವುಗಳ ಪೂರ್ಣವಾದ ವಿವರ ನೀಡುವುದು?

ಆ) ಬೆಳಗಾವಿ ಬೈಲಹೊಂಗಲ ಘಟಕದಲ್ಲಿ ಕಳೆದ 2 ವರ್ಷಗಳಲ್ಲಿ ಎಷ್ಟು ಹೊಸ ಮಾರ್ಗಗಳನ್ನು ಪ್ರಾರಂಭಿಸಲಾಗಿದೆ. (ಅವುಗಳ ವಿವರಗಳನ್ನು ನೀಡುವುದು)

ಇ) ಇನ್ನೂ ಹೆಚ್ಚಿನ ಮಾರ್ಗಗಳ ಅವಶ್ಯಕತೆಯಿಂದ್ದರೂ ಸಹ ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳು ಮಾರ್ಗಗಳನ್ನು ಪ್ರಾರಂಭಿಸದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಇನ್ನೂ ಹೆಚ್ಚಿನ ಹೊಸ ಮಾರ್ಗಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ರಮಾನಾಥ ರೈ ಸಾರಿಗೆ ಸಚಿವರು

ಅ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಹಾಗೂ ಪ್ರಸ್ತುತ ವರ್ಷದಲ್ಲಿ 60 ಮಾರ್ಗಗಳನ್ನು ಪ್ರಾರಂಭಿಸಲಾಗಿದೆ.

ಆ) ಬೆಳಗಾವಿ ಜಿಲ್ಲೆ ಬೈಲಹೊಂಗಲ ಘಟಕದಲ್ಲಿ ಕಳೆದ 2 ವರ್ಷದಲ್ಲಿ ಒಟ್ಟು 8 ಹೊಸ ಮಾರ್ಗಗಳನ್ನು ಪ್ರಾರಂಭಿಸಲಾಗಿದೆ. ಅವುಗಳ ವಿವರ ಅನುಬಂಧ - ಬಿ, ರಲ್ಲಿ ನಮೂದಿಸಿದೆ.

ಇ) ಇನ್ನೂ ಹೆಚ್ಚಿನ ಮಾರ್ಗಗಳ ಅವಶ್ಯಕತೆ ಇದ್ದಲ್ಲಿ ಅವುಗಳನ್ನು ಪರಿಶೀಲಿಸಿ, ಕ್ರಮ ಕೈಗೊಳ್ಳಲಾಗುವುದು.

ಈ) ಪ್ರಸಕ್ತ ಸಾಲಿನಲ್ಲಿ ಜನದಟ್ಟಣೆಗನುಗುಣವಾಗಿ ಹೆಚ್ಚಿನ ಹೊಸ ಮಾರ್ಗಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಅಬಕಾರಿ ಇಲಾಖೆಯಿಂದ ರಾಜ್ಯದ ಬೊಕ್ಕಸಕ್ಕೆ ಬರತಕ್ಕ ಹಣ

27(4) -ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಬಕಾರಿ ಇಲಾಖೆಯಿಂದ ರಾಜ್ಯದ ಬೊಕ್ಕಸಕ್ಕೆ ಕಳೆದ ಹಾಗೂ ಪ್ರಸ್ತುತ ವರ್ಷದಲ್ಲಿ ಎಷ್ಟು ಹಣ ಬರಬಹುದೆಂದು ನಿರೀಕ್ಷಿಸಲಾಗಿತ್ತು.

ಆ) ಅಬಕಾರಿ ಇಲಾಖೆಗೆ ಇಲ್ಲಿಯವರೆಗೆ ವಸೂಲಾದ ಮೊತ್ತವೆಷ್ಟು ಹಾಗೂ ಯಾವ ಯಾವ ಗುತ್ತಿಗೆದಾರರಿಂದ ಎಷ್ಟು ಎಷ್ಟು ಹಣ ಬಾಕಿ ಇರುವುದು (ಮಾಹಿತಿ ನೀಡುವುದು)?